ಅಂಗನವಾಡಿ ಕಟ್ಟಡಗಳು

281 (708) ಶ್ರೀ ರುದ್ರೇಶಗೌಡ ವೈ.ಎನ್. (ಬೇಲೂರು) :– ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ರಾಜ್ಯದಲ್ಲಿ ಈ ಹಿಂದೆ ನಿರ್ಮಿಸಲಾಗಿರುವ ಅಂಗನವಾಡಿ ಕಟ್ಟಡಗಳು ದುಸ್ಥಿತಿಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ, ಇಂತಹ ಕಟ್ಟಡಗಳ ದುರಸ್ತಿಗೆ ಸರ್ಕಾರ ಏನು ಕ್ರಮ ಕೈಗೊಂಡಿದೆ? (ಮಾಹಿತಿ ನೀಡುವುದು)

ಶ್ರೀ ಕಳಶಪ್ಪ ಜಿ. ಬಂಡಿ (ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರು) :

ಅ) ಹೌದು.

ಆ) 2011–12ನೇ ಸಾಲಿನಿಂದ ಜಿಲ್ಲಾ ಪಂಚಾಯತ್ ಕಾರ್ಯಕ್ರಮದಡಿ ಇಲಾಖಾ ವಂತಿಗೆಯಡಿ ಅಂಗನವಾಡಿ ಕಟ್ಟಡಗಳ ನಿರ್ವಹಣೆಗಾಗಿ ಅನುದಾನ ಒದಗಿಸಲಾಗುತ್ತಿದೆ. ಈ ಯೋಜನೆಯಡಿ 2012–13ನೇ ಸಾಲಿನಲ್ಲಿ ಅಂಗನವಾಡಿ ಕಟ್ಟಡಗಳ ನಿರ್ವಹಣೆಗಾಗಿ ರೂ. 15.00 ಕೋಟಿ ಅನುದಾನವನ್ನು ಒದಗಿಸಲಾಗಿರುತ್ತದೆ. ಈ ಅನುದಾನವನ್ನು ಅಂಗನವಾಡಿ ಕಟ್ಟಡಗಳ ದುರಸ್ತಿಗೆ ವಿನಿಯೋಗಿಸಲು ಸೂಚನೆಗಳನ್ನು ನೀಡಲಾಗಿದೆ.

ರಾಷ್ಟ್ರೀಯ ಮಾಧ್ಯಮಿಕ ಶಿಕ್ಷಣ ಯೋಜನೆ

266 (729) ಶ್ರೀ ಪಾಟೀಲ್ ಎಂ.ಬಿ. (ಬರ್ಬಲೇಶವರ) :– ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ರಾಷ್ಟ್ರೀಯ ಮಾಧ್ಯಮಿಕ ಶಿಕ್ಷಣ ಅಭಿಯಾನ ಯೋಜನೆ ಅಡಿ ವಿಜಾಪುರ ಜಿಲ್ಲೆಯಲ್ಲಿ 2010–11, 2011–12 ನೇ ಸಾಲಿನಲ್ಲಿ ಪ್ರೌಢಶಾಲೆಗಳನ್ನು ಯಾವ ಯಾವ ಸ್ಥಳಗಳಲ್ಲಿ ಪ್ರಾರಂಭಿಸಲಾಗಿದೆ; (ಕ್ಷೇತ್ರವಾರು ಮಾಹಿತಿ ನೀಡುವುದು)

ಆ) 2012–13ನೇ ಸಾಲಿನಲ್ಲಿ ಹೊಸದಾಗಿ ಪ್ರೌಢ ಶಾಲೆಗಳನ್ನು